**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು–1**

**ಸಂಖ್ಯೆ: ಇ–ಆಡಳಿತ–ಹೆಚ್.ಆರ್.ಎಂ.ಎಸ್ .1/2015–16** **ದಿನಾಂಕ:29–07–2015**

**ಸುತ್ತೋಲೆ**

ವಿಷಯ: ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ಶಿಕ್ಷಣ ಇಲಾಖೆಯ ಎಲ್ಲಾ ನೌಕರರ ಆಧಾರ್ ಕಾರ್ಡ್ ವಿವರಗಳನ್ನು ನಮೂದಿಸುವ ಬಗ್ಗೆ.

ಉಲ್ಲೇಖ: ದಿನಾಂಕ: 28–05–2015 ರಂದು ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಿದಂತೆ.

* * *

2008 ರಿಂದ ಹೆಚ್.ಆರ್.ಎಂ.ಎಸ್ ತಂತ್ರಾಂಶದ ಮೂಲಕ ರಾಜ್ಯದ ಎಲ್ಲಾ ಸರ್ಕಾರಿ ನೌಕರರ ವೇತನವನ್ನು ಪಡೆಯಲಾಗುತ್ತಿದೆ. ಅಂತೆಯೇ ಸದರಿ ತಂತ್ರಾಂಶದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಅನುದಾನಿತ ಶಿಕ್ಷಕರ ವೇತನವನ್ನು ಪಡೆಯಲಾಗುತ್ತಿದೆ. ಶಿಕ್ಷಕರ ಹಾಗೂ ಸಿಬ್ಬಂದಿಗಳ ವೈಯಕ್ತಿಕ ವಿವರಗಳನ್ನು ಈಗಾಗಲೇ ತಂತ್ರಾಂಶದಲ್ಲಿ ಅಳವಡಿಸಲಾಗಿದ್ದು, ಆಧಾರ್ ಕಾರ್ಡ್ ವಿವರಗಳನ್ನು ಅಳವಡಿಸದೇ ಇರುವುದನ್ನು ಗಮನಿಸಲಾಗಿದೆ.

ದಿನಾಂಕ: 28–05–2015 ರಂದು ನಡೆದ ಸಭೆಯಲ್ಲಿ ಪ್ರಸ್ತಾಪಿಸಿದಂತೆ, ನಿಮ್ಮ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಶಿಕ್ಷಕರುಗಳು ಹಾಗೂ ಸಿಬ್ಬಂದಿಗಳ (ಸರ್ಕಾರಿ ಹಾಗೂ ಅನುದಾನಿತ) ಆಧಾರ್ ಕಾರ್ಡ್ ವಿವರಗಳಾದ ಆಧಾರ್ ಕಾರ್ಡ ಸಂಖ್ಯೆ (**Adhar Card No.**) ಹಾಗೂ ಎಪಿಕ್ ಸಂಖ್ಯೆ (**EPIC Card No.**) ಗಳನ್ನು ನಮೂದಿಸುವುದು ಕಡ್ಡಾಯವಾಗಿದೆ.

ಆದ್ದರಿಂದ ನಿಮ್ಮ ಜಿಲ್ಲೆಯಲ್ಲಿರುವ ಎಲ್ಲಾ ವೇತನ ಡ್ರಾಯಿಂಗ್ ಅಧಿಕಾರಿಗಳಿಗೆ ಈ ಮೇಲೆ ಪ್ರಸ್ತಾಪಿಸಿದ ವಿಚಾರಗಳನ್ನು ತಿಳಿಸಿ, ದಿನಾಂಕ:15–09–2015 ರೊಳಗೆ ತಪ್ಪದೇ ಪೂರ್ಣಗೊಳಿಸಲು ಈ ಮೂಲಕ ಸೂಚಿಸಿದೆ.

(ಸಹಿ) 29/7/15

**ಆಯುಕ್ತರು**

**ಸಾರ್ವಜನಿಕ ಶಿಕ್ಷಣ ಇಲಾಖೆ**

**ಇವರಿಗೆ**

1. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ನೀಡಿದೆ.
2. ಅಪರ ಆಯುಕ್ತರು, ಧಾರವಾಡ ಮತ್ತು ಕಲಬುರ್ಗಿ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
3. ನಿರ್ದೇಶಕರು, ಕೆ.ಎಸ್.ಇ.ಇ.ಬಿ. ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
5. ನಿರ್ದೇಶಕರು, ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷೆಗಳು, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
6. ಜಂಟಿ ನಿರ್ದೇಶಕರು (ಮಧ್ಯಾಹ್ನ ಉಪಾಹಾರ ಯೋಜನೆ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಇವರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8. ರಾಜ್ಯದ ಎಲ್ಲಾ ಪ್ರಾಂಶುಪಾಲರು (ಡಯಟ್) ಇವರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
9. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
10. ಕಛೇರಿ ಪ್ರತಿ.